ಜುಲೈ–09ರ ತಿಂಗಳಲ್ಲಿಯೂ ಕೋಲಾರ ಹಾಗೂ ಸುತ್ತಮುತ್ತ ಜಿಲ್ಲೆಗಳಲ್ಲಿ ಮಳೆಯ ಅಭಾವದಿಂದ ರೈತರ ವಿದ್ಯುಚ್ಛಕ್ತಿ ಬೇಡಿಕೆ ಹೆಚ್ಚಾಗಿರುತ್ತದೆ. ಮುಳುಬಾಗಿಲು ತಾಲ್ಲೂಕಿನಲ್ಲಿ 6 ವಿದ್ಯುತ್ ಉಪಕೇಂದ್ರಗಳಿದ್ದು ಇವುಗಳಿಂದ ಗ್ರಾಮಾಂತರ ಪ್ರದೇಶಗಳಿಗೆ ಕನಿಷ್ಠ 6 ಗಂಟೆ 3 ಫೇಸ್ ಹಾಗೂ 6 ಗಂಟೆ ಸಿಂಗಲ್ ಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ ಮತ್ತು ಮುಳುಬಾಗಿಲು ಪಟ್ಟಣಕ್ಕೆ 20 ಗಂಟೆಗಳ ಕಾಲ 3 ಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ.

ಇ) ಇತ್ತೀಚಿನ ದಿನಗಳಲ್ಲಿ ವಿದ್ಯುತ್ ಉತ್ಪಾದನಾ ಕೇಂದ್ರಗಳ ಜಲಾನಯನ ಪ್ರದೇಶದಲ್ಲಿ ಹೆಚ್ಚು ಮಳೆಯಾಗುತ್ತಿದ್ದು ಜಲಾಶಯಗಳ ನೀರಿನ ಒಳಹರಿವು ಏರಿಕೆಯಲ್ಲಿರುತ್ತದೆ. ಇದೇ ಪ್ರಮಾಣದಲ್ಲಿ ನೀರಿನ ಒಳಹರಿವು ಇದ್ದಲ್ಲಿ ಗ್ರಾಮೀಣ ಪ್ರದೇಶಗಳಿಗೆ ಹೆಚ್ಚಿನ ಅವಧಿಯಲ್ಲಿ ವಿದ್ಯುತ್ ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗುವುದು.

784 ಶ್ರೀ ಖಾದರ್ ಯು.ಟಿ.(ಮಂಗಳೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 2008–09ನೇ ಸಾಲಿನಲ್ಲಿ ಸರ್ಕಾರ ಹೊಸ ಪ್ರೌಢ ಶಾಲೆಗಳನ್ನು ಮಂಜೂರು ಮಾಡಿರುವ ಸಂಖ್ಯೆ ಎಷ್ಟು; (ವಿವರ ನೀಡುವುದು);

ಆ) ಹಾಗಿದ್ದಲ್ಲಿ, ದಕ್ಷಿಣ ಕನ್ನಡ ಜಿಲ್ಲೆಗೆ ಎಷ್ಟು ಪ್ರೌಢ ಶಾಲೆಗಳು ಮಂಜೂರಾಗಿವೆ; (ತಾಲ್ಲೂಕುವಾರು ವಿವರ ನೀಡುವುದು)

ಇ) 2009–10ನೇ ಸಾಲಿನಲ್ಲಿ ಹೊಸದಾಗಿ ಪ್ರೌಢ ಶಾಲೆಗಳು ಮಂಜೂರಾಗಿವೆ;(ತಾಲ್ಲೂಕುವಾರು ವಿವರ ನೀಡುವುದು);

ಈ) 2009–10ನೇ ಸಾಲಿನಲ್ಲಿ ಹೊಸದಾಗಿ ಪ್ರೌಢ ಶಾಲೆಗಳನ್ನು ತೆರೆಯಲು ಸರ್ಕಾರ ಉದ್ದೇಶಿಸಿದೆಯೇ;

ಉ) ಹಾಗಿದ್ದಲ್ಲಿ, ದಕ್ಷಿಣ ಜಿಲ್ಲೆಯಲ್ಲಿ ಎಷ್ಟು ಪ್ರೌಢ ಶಾಲೆಗಳ ಪ್ರಾರಂಭಕ್ಕೆ ಪ್ರಸ್ತಾವನೆಗಳು ಬಂದಿವೆ; ವಿವರ ನೀಡುವುದು?

ಶ್ರೀ ಕಾಗೇರಿ ವಿಶ್ವೇಶ್ವರ ಹೆಗಡೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಇಲ್ಲ.

ಈ) ಇಲ್ಲ.

ಉ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು, 42 ಸ್ಥಳಗಳಲ್ಲಿ ಸರ್ಕಾರಿ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಪ್ರಸಾವನೆ ಬಂದಿರುತ್ತವೆ.

884 ಶ್ರೀ ಕಿಮ್ಮನೆ ರತ್ನಾಕರ್ (ತೀರ್ಥಹಳ್ಳಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಪ್ರಾಥಮಿಕ, ಪ್ರೌಢಶಾಲೆ ಮತ್ತು ಸಂಯುಕ್ತ ಪ್ರೌಢಶಾಲೆಗಳಲ್ಲಿ ಕೊಠಡಿಗಳ ಕೊರತೆ ಇದೆಯೇ;

ಆ) ಇದ್ದಲ್ಲಿ, ಈ ಕೊಠಡಿಗಳ ಸಂಖ್ಯೆ ಎಷ್ಟು ಮತ್ತು ಯಾವ ಯಾವ ಹೋಬಳಿಯಲ್ಲಿ ಯಾವ ಯಾವ ಶಾಲೆಯಲ್ಲಿ ಕೊಠಡಿಗಳ ಕೊರತೆ ಇದೆ;

ಇ) ಹಾಗಿದ್ದಲ್ಲಿ, ಕೊಠಡಿಗಳ ಕೊರತೆ ನೀಗಿಸಲು ಸರ್ಕಾರವು ತಕ್ಷಣ ಕೈಗೊಂಡ ಕ್ರಮಗಳೇನು;

ಈ) ಈ ಶಾಲಾ ಕಟ್ಟಡಗಳ ಕಾಮಗಾರಿ ಅರ್ಧಕ್ಕೆ ನಿಂತುಹೋದ ಪ್ರಕರಣಗಳು ಯಾವುವು;

ಉ) ಹಾಗಿದ್ದಲ್ಲಿ, ಅದಕ್ಕೆ ಕಾರಣಗಳೇನು (ವಿವರ ನೀಡುವುದು)?

ಶ್ರೀ ಕಾಗೇರಿ ವಿಶ್ವೇಶ್ವರ ಹೆಗಡೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಇದೆ.

ಆ) 75 ಕೊಠಡಿಗಳ ಕೊರತೆ ಇರುತ್ತದೆ. ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.

ಇ) ಕೊಠಡಿಗಳ ಕೊರತೆ ನೀಗಿಸಲು ಆರ್.ಐ.ಡಿ.ಎಫ್–15ರಡಿ ಅನುದಾನದ ಲಭ್ಯತೆಯನ್ನು ಆಧರಿಸಿ ಕ್ರಮ ವಹಿಸಲಾಗುವುದು.

ಈ) ಬಾರಿ ಕೈಸೇರು, ನೊಣಬೂರು, ಕಡ್ತೂರು, ಮಳಲಿಮಕ್ಕಿ, ರಾಮಕೃಷ್ಣಪುರ, ಮಂಡಗದ್ದೆ, ಕೋಡ್ಲು ಸರ್ಕಾರಿ ಪ್ರೌಢಶಾಲೆಗಳ ಹಾಗೂ ಮೇಗರವಳ್ಳಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಕಾಮಗಾರಿಗಳು ಅರ್ಧಕ್ಕೆ ನಿಂತಿರುತ್ತದೆ.

ಉ) ಸ.ಪ್ರೌ.ಶಾಲೆ ಬಾವಿ ಕೈ ಸೇರು: ಮಾಹಿತಿ ಸಿಂಧು ಯೋಜನೆಯಡಿ ಪ್ರಯೋಗಾಲಯ, ಕೊಠಡಿ ಮಂಜೂರಾಗಿತ್ತು. ಆದರೆ ತಾಂತ್ರಿಕ ತೊಂದರೆಗಳಿಂದಾಗಿ ಮಂಜೂರಾದ ಅನುದಾನವನ್ನು ನಿಗದಿತ ಅವಧಿಯಲ್ಲಿ ಖರ್ಚು ಮಾಡಲು ಸಾಧ್ಯವಾಗಲಿಲ್ಲ.